KATK010056102023

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ, ತುಮಕೂರು**

**ಸತ್ರ ಮೊಕದ್ದಮೆ ಸಂ.125/2023**

ಪ್ರಾ.ಸಾ. ಃ **12**

ದೋ.ಸಾ. ಃ **17**

ದಿ.**10.07.2025**

ಹೆಸರು ಃ ರಘು

ತಂದೆಯ ಹೆಸರು ಃ ಚಿಕ್ಕಣ್ಣ

ವಯಸ್ಸು ಃ **47** ವರ್ಷ

ಉದ್ಯೋಗ ಃ ವ್ಯವಸಾಯ

ವಾಸಸ್ಥಳ ಃ ಮರಡಿಗರಪಾಳ್ಯ, ಹೆಬ್ಬೂರು ಹೋಬಳಿ

ಸಾಕ್ಷಿಯನ್ನು ಕರೆಸಿ, ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ**

1. ಈಗ ನನಗೆ ತೋರಿಸಿದ ನೋಟೀಸ್ ನಲ್ಲಿ ನನ್ನ ಸಹಿ ಇದೆ. ಅದನ್ನು ನಿಶಾನೆ ಪಿ32 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿಶಾನೆ ಪಿ32(ಎ) ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸಿದ ಮೃತದೇಹದ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಅದನ್ನು ನಿಶಾನೆ ಪಿ33 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿಶಾನೆ ಪಿ33(ಎ) ಎಂದು ಗುರುತಿಸಲಾಯಿತು. ನಾನು ಗಿರೀಶ ಅಲಿಯಾಸ್ ಪಾಂಡುರಂಗ ನ ಮೃತದೇಹವನ್ನು ನೋಡಲು ತುಮಕೂರು ಜಿಲ್ಲಾ ಆಸ್ಪತ್ರೆಯ ಶವಾಗಾರಕ್ಕೆ ಹೋಗಿದ್ದೆನು. ಆ ದಿನ ದಿನಾಂಕ 19.03.2023 ಆಗಿತ್ತು. ಹೊಡೆದಾಟ ಆಗಿ ಆತನ ಕೊಲೆಯಾಗಿತ್ತು. ಆ ಶವಾಗಾರಕ್ಕೆ ಪೋಲೀಸ್ ವೃತ್ತ ನಿರೀಕ್ಷಕರು ಬಂದು, ಪೋಲೀಸರು ಮೃತದೇಹವನ್ನು ಪರಿಶೀಲಿಸಿ ಪಂಚನಾಮೆಯನ್ನು ಮಾಡಿದರು. ಆ ಸಮಯದಲ್ಲಿ ತೆಗೆದಂತಹ ಫೋಟೋಗಳನ್ನು ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಶಾನೆ ಪಿ15 ರಿಂದ 24 ಎಂದು

ಗುರುತಿಸಲಾಗಿದೆ.

**<u>ಪಾಟೀ ಸವಾಲು ಶ್ರೀ.ಆರ್.ಬಾಲಕೃಷ್ಣ, ಮುಖ್ಯ ಕಾನೂನು ಅಭಿರಕ್ಷಕರಿಂದ ಆರೋಪಿತನ ಪರವಾಗಿ:</u>**

**2.** ಪಂಚನಾಮೆಯಲ್ಲಿ ಕೊಲೆ ಆಗಿದೆ ಎಂದು ಬರೆದಿದ್ದಾರೆ. ಅದರಲ್ಲಿ ಇನ್ನು ಏನು ಬರೆದಿದ್ದಾರೆ ಎಂದು ನನಗೆ ಈಗ ಹೇಳಲಾಗುವುದಿಲ್ಲ. ಗಿರೀಶನ ಕೊಲೆಯಾಗಿದ್ದಕ್ಕೆ ಮೃತದೇಹದ ಪಂಚನಾಮೆ ಮಾಡಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇಲ್ಲ

**(**ಉಕ್ತಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಲ್ಪಟ್ಟಿತು**).**

ಓದಿ ಹೇಳಿ ಕೇ ಸರಿ ಇದೆ ಎಂದು ಒಪ್ಪಿದ್ದಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು